ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	161
ಸದಸ್ಯರ ಹೆಸರು	ಶ್ರೀ ಎಂ ನಾರಾಯಣಸ್ವಾಮಿ [ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು]
ಉತ್ತರಿಸಬೇಕಾದ ದಿನಾಂಕ	01-02-2021
ಉತ್ತರಿಸಬೇಕಾದ ಸಚಿವರು	ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಪ್ರಶ್ನೆ	ಉತ್ತರ
ಅ) ರಾಷ್ಟ್ರೀಯ ಶಿಕ್ಷಣ ನೀತಿ ಅನುಷ್ಠಾನಕ್ಕಾಗಿ ರಾಜ್ಯದಲ್ಲಿಯೂ ಕರ್ನಾಟಕ ಶಿಕ್ಷಣ ಆಯೋಗ ರಚನೆ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು;	ಕರ್ನಾಟಕದಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ ಅನುಷ್ಠಾನ ಕುರಿತು ರಚಿಸಿರುವ ಕಾರ್ಯಪಡೆ ತನ್ನ ವರದಿಯಲ್ಲಿ ಸೂಚಿಸಿರುವಂತೆ ಕರ್ನಾಟಕ ಶಿಕ್ಷಣ ಆಯೋಗ ರಚಿಸುವ ಪ್ರಕ್ರಿಯೆ ಪ್ರಾರಂಭವಾಗಿದೆ.
ಆ) ಆರ್ಥಿಕವಾಗಿ ಹಿಂದುಳಿದ ಮಕ್ಕಳಿಗಾಗಿ ಮತ್ತು ವಿಶೇಷ ಸಾಮರ್ಥ್ಯವುಳ್ಳವರಿಗೆ ಅನುದಾನ ಸೇರಿದಂತೆ ಹಾಗೂ ಇತರೆ ಶೈಕ್ಷಣಿಕ ಕಾರ್ಯಕ್ಕೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು;	ರಾಷ್ಟ್ರೀಯ ಶಿಕ್ಷಣ ನೀತಿ ಅನ್ವಯ ಆರ್ಥಿಕವಾಗಿ ಹಿಂದುಳಿದ ಮತ್ತು ವಿಶೇಷ ಸಾಮರ್ಥ್ಯವುಳ್ಳ ಮಕ್ಕಳಿಗೆ ವಿಶೇಷ ಅನುದಾನವನ್ನು (Gender Inclusion Fund and Disability Funding) ಮೀಸಲಿಡಲು ವ್ಯವಹರಿಸಲಾಗುತ್ತಿದೆ. ರಾಷ್ಟ್ರೀಯ ಶಿಕ್ಷಣ ನೀತಿಯಲ್ಲಿ ಶಿಫಾರಸ್ಸು ಮಾಡಿರುವಂತೆ ಸೌಲಭ್ಯಗಳನ್ನು ಒದಗಿಸಲು SEZ (Social Education Zone)ಗಳನ್ನು ಗುರ್ತಿಸಲಾಗುತ್ತಿದೆ. ಹಾಗೆಯೇ ವಿಶೇಷ ಅಗತ್ಯತೆಯುಳ್ಳ ಮಕ್ಕಳಿಗೆ ಸಾಧನ ಸಲಕರಣೆಗಳನ್ನು ಒದಗಿಸಿ. ವಿಶೇಷ ಸಂಪನ್ಮೂಲ ಕೇಂದ್ರಗಳನ್ನು ಬಲವರ್ಧನೆಗೊಳಿಸಲಾಗುವುದು. ಎಲ್ಲಾ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುವ ನಿಟ್ಟಿನಲ್ಲಿ ಇಲಾಖೆಯು ಪಠ್ಯಕ್ರಮ ಮತ್ತು ಬೋಧನಾ ಪದ್ಧತಿಗಳನ್ನು ರೂಪಿಸಿಕೊಳ್ಳಲಾಗುತ್ತಿದ್ದು, ಇದರಂತೆ ಶಿಕ್ಷಕರಿಗೆ ತರಬೇತಿ ನೀಡುವ ಪರಿಶೀಲನೆಯಲ್ಲಿರುತ್ತದೆ.
ಇ) ಈ ಕಾರ್ಯಕ್ರಮಕ್ಕೆ ಪ್ರಸಕ್ತ ಸಾಲಿನಲ್ಲಿ ಎಷ್ಟು ಅನುದಾನ ಮೀಸಲಿಡಲಾಗಿದೆ ಮತ್ತು ವೆಚ್ಚ ಮಾಡಲಾಗಿದೆ ? [ಜಿಲ್ಲಾವಾರಿ ಮಾಹಿತಿ ಒದಗಿಸುವುದು]	ಮೇಲಿನ 'ಅ' ಮತ್ತು 'ಆ' ಪ್ರಶ್ನೆಯ ಉತ್ತರಗಳ ಹಿನ್ನೆಲೆಯಲ್ಲಿ ಅನ್ವಯಿಸುವುದಿಲ್ಲ.

ಇಪಿ 30 ಪಿಜಿಸಿ 2021

S. S.

[ಎಸ್.ಸುರೇಶ್ ಕುಮಾರ್]
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು.